# <u>ಮಂಗಳೂರು ವಿಶ್ವವಿದ್ಯಾನಿಲಯ</u>

**ದಿನಾಂಕ 11.03.2022ರಂದು ಪೂರ್ವಾಹ್ನ ಗಂಟೆ 10:00ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟ್ ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2022ನೇ ಸಾಲಿನ ಪ್ರಥಮ ವಿಶೇಷ ಸಭೆಯ ನಡವಳಿಗಳು.**

**ಉಪಸ್ಥಿತರು**

**ಅನುಪಸ್ಥಿತರು**

**ಪ್ರಾರಂಭಿಕ**

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಗಳು ಹಾಗೂ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಸಭೆಗೆ ಸ್ವಾಗತಿಸಿದರು.

**ಪ್ರಾಸ್ತಾವಿಕ**

ಮಾನ್ಯ ಕುಲಪತಿಗಳು ಪ್ರಾಸ್ತಾವಿಕವಾಗಿ ಮಾತನಾಡುತ್ತಾ ಈ ಕೆಳಗಿನ ವಿಷಯಗಳನ್ನು ಸಭೆಗೆ ತಿಳಿಸಿದರು.

1. ದಿನಾಂಕ 29.01.2022 ರಂದು ನಡೆದ ಸಿಂಡಿಕೇಟು ಸಭೆಯಲ್ಲಿ ಗೌರವ ಡಾಕ್ಟರೇಟ್ ಪದವಿಗೆ ಸಂಬಂಧಿಸಿ ತಯಾರಿಸಲಾದ ಸಂಭಾವ್ಯ ಪಟ್ಟಿಯಲ್ಲಿ ನಾಮನಿರ್ದೇಶಿತರಾದ ಇಬ್ಬರ ಹೆಸರುಗಳನ್ನು ಸದರಿಯವರುಗಳ ಮನವಿಯ ಮೇರೆಗೆ ಸಂಭಾವ್ಯ ಪಟ್ಟಿಯಿಂದ ಕೈಬಿಡಲಾದ ಹಿನ್ನೆಲೆಯಲ್ಲಿ ಮತ್ತೋರ್ವರ ಹೆಸರನ್ನು ಸೇರಿಸಲಾಯಿತು .ಈ ನಿರ್ಣಯವನ್ನು ಸಿಂಡಿಕೇಟು ಸಭೆಯು ಸರ್ವಾನುಮತದಿಂದ ಅನುಮೋದಿಸಿತು.
2. ಮಂಗಳೂರು ವಿಶ್ವವಿದ್ಯಾನಿಲಯದ ಮಂಗಳ ಯೋಜನೆಯಡಿ ಕೇರಳ–ಕರ್ನಾಟಕ ಗಡಿನಾಡು ಪ್ರದೇಶದಲ್ಲಿರುವ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಅಜ್ಜಿನಡ್ಕ, ಕೋಟೆಕಾರು ಮತ್ತು ಶ್ರೀ ಮಹಾಲಿಂಗೇಶ್ವರ ವಿದ್ಯಾನಿಕೇತನ ಕುಂಜತ್ತೂರು ಎಂಬ ಎರಡು ಶಾಲೆಗಳನ್ನು ದತ್ತು ತೆಗೆದುಕೊಳ್ಳುವ ವಿಚಾರವನ್ನು ಮಾನ್ಯ ಕುಲಪತಿಗಳು ಸಭೆಗೆ ತಿಳಿಸಿದ್ದು ಸಿಂಡಿಕೇಟು ಸಭೆಯು ಅನುಮೋದಿಸಿತು.
3. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ದಿನಾಂಕ 11.03.2022 ರಂದು ಮುಲ್ಕಿಯಲ್ಲಿ ನಡೆಯಲಿರುವ ರಾಜ್ಯ ಮಟ್ಟದ ಕೃಷಿಮೇಳ ಕಾರ್ಯಕ್ರಮದ ಉದ್ಘಾಟನಾ ಸಮಾರಂಭದಲ್ಲಿ ಮಾನ್ಯ ಕುಲಪತಿಯವರು ಭಾಗವಹಿಸುವ ವಿಚಾರವನ್ನು ಸಭೆಗೆ ತಿಳಿಸಿದರು.

## I. ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು:

**ಕಾರ್ಯಸೂಚಿ ಸಂಖ್ಯೆ:** ಇಡಿ:ವಿಸ.1:1(2022)

**ವಿಷಯ:** Construction of Compound wall to the Girls Hostel Jnana Kavery PG Centre ChikkaAluvara, Kodagu Dist.

ಅಂದಾಜು ಮೊತ್ತ ರೂ.18.15 ಲಕ್ಷಗಳು

**ನಿರ್ಣಯ:** ದಿನಾಂಕ 10.02.2022 ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ವಿಸ.1:2(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯ ಆವರಣದಲ್ಲಿರುವ "'ಬಿ'" ಮಾದರಿ ಬ್ಲಾಕ್ 2ರ ಹೊರ ಭಾಗಗಳ ನಿರ್ವಹಣೆ ಹಾಗೂ ವಸತಿಗೃಹ ಸಂಖ್ಯೆ 5,6,7,8 ರ ಒಳಭಾಗದ ದುರಸ್ತಿ ಕಾಮಗಾರಿ – ಅಂದಾಜುಪಟ್ಟಿ ಅನುಮೋದನೆ ಬಗ್ಗೆ.

ಅಂದಾಜು ಮೊತ್ತ ರೂ.15.75 ಲಕ್ಷ

**ನಿರ್ಣಯ:** ದಿನಾಂಕ 10.02.2022 ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ವಿಸ.1:3(2022)

**ವಿಷಯ:** ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿ ಶತಮಾನೋತ್ಸವ ಕಟ್ಟಡದ ಅಗತ್ಯದ ದುರಸ್ತಿ ಹಾಗೂ ನಿರ್ವಹಣಾ ಕಾಮಗಾರಿ

ಅಂದಾಜು ಮೊತ್ತ ರೂ.39.50ಲಕ್ಷಗಳು

**ನಿರ್ಣಯ:** ದಿನಾಂಕ 10.02.2022 ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ವಿಸ.1:4(2022)

**ವಿಷಯ:** ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿನ ವಿಜ್ಞಾನ ವಿಭಾಗಗಕ್ಕೆ ಸಂಬಂಧಿಸಿದ ಪ್ರಯೋಗಾಲಯಗಳ ಅಗತ್ಯದ ದುರಸ್ತಿ ಮತ್ತು ನಿರ್ವಹಣಾ ಕಾಮಗಾರಿ–Component 9 of RUSA 2.0 Grant

ಅಂದಾಜು ಮೊತ್ತ ರೂ.16.68 ಲಕ್ಷಗಳು

**ನಿರ್ಣಯ:** ದಿನಾಂಕ 10.02.2022 ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ವಿಸ.1:5(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿರುವ 0.5 MGD ಸಾಮರ್ಥ್ಯದ ನೀರು ಶುದ್ಧೀಗಾರಕ್ಕೆ ಆವರಣಗೋಡೆ ನಿರ್ಮಿಸುವುದು ಮತ್ತು ಬಿಟುಮಿನಸ್ (ಟಾರು) ಹಾಸನ್ನು ಪ್ರವೇಶ ರಸ್ತೆಗೆ ಅಳವಡಿಸುವುದು – ಅಂದಾಜುಪಟ್ಟಿ ಅನುಮೋದನೆ ಬಗ್ಗೆ.

ಅಂದಾಜು ಮೊತ್ತ ರೂ.29.50 ಲಕ್ಷ

**ನಿರ್ಣಯ:** ದಿನಾಂಕ 10.02.2022 ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ವಿಸ.1:6(2022)

**ವಿಷಯ:** Extension work behind Mangala Canteen for the construction of Food court at Mangalore University Campus, Mangalagangothri – ಟೆಂಡರು ಅಂಗೀಕರಿಸುವ ಬಗ್ಗೆ.

**ನಿರ್ಣಯ:** ದಿನಾಂಕ 10.02.2022 ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ವಿಸ.1:7(2022)

**ವಿಷಯ:** Disposal of waste collected in dustbins at Mangalore University, Campus - ಟೆಂಡರ್ ಅಂಗೀಕರಿಸುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ನಿಯಮಾನುಸಾರ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ವಿಸ.1:8(2022)

**ವಿಷಯ:** Supply of 60 KLD advanced sequencing batch reactor (SBR) technology Sewage Water Treatment Plant at International Hostel Mangalore Univeristy Campus, Mangalagangothri - ಟೆಂಡರ್ ಅನುಮೋದನೆ ಬಗ್ಗೆ.

**ನಿರ್ಣಯ:** ದಿನಾಂಕ 10.02.2022 ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ವಿಸ.1:9(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ವಿಶ್ವಮಂಗಳ ವಿದ್ಯಾಸಂಸ್ಥೆಯಲ್ಲಿ ಶಾಲಾ ಕೊಠಡಿ ನಿರ್ಮಾಣ ಕಾಮಗಾರಿಯ ಹೆಚ್ಚುವರಿ ಪರಿಮಾಣ ಮತ್ತು ಹೆಚ್ಚುವರಿ ಐಟಂ ಮೊತ್ತ ಹಾಗೂ ಪರಿಷ್ಕೃತ ಅಂದಾಜು ಮೊತ್ತದ ಅನುಮೋದನೆ ಬಗ್ಗೆ.

**ನಿರ್ಣಯ:** ದಿನಾಂಕ 10.02.2022 ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ವಿಸ.1:10(2022)

**ವಿಷಯ:** Construction of Shree Narayana Guru Adhyayana Peeta Building at Mangalore University Campus, Mangalagangothri – ಕಾಲಾವಧಿ ವಿಸ್ತರಣೆ

**ನಿರ್ಣಯ:** ವಿಶ್ವವಿದ್ಯಾನಿಲಯಕ್ಕೆ ಯಾವುದೇ ಆರ್ಥಿಕ ನಷ್ಟ ಉಂಟಾಗದ ಷರತ್ತಿನ ಮೇರೆಗೆ ದಿನಾಂಕ 10.02.2022 ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ವಿಸ.1:11(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ಉದ್ಯೋಗ ಮಾಹಿತಿ ಕೇಂದ್ರ ಕಟ್ಟಡದ ಮೊದಲನೇ ಅಂತಸ್ತಿನಲ್ಲಿ ಪರಿಸರ ವಿಜ್ಞಾನ ವಿಭಾಗ ಕಟ್ಟಡದ ನಿರ್ಮಾಣ RUSA ಅನುದಾನ – ಕಾಲಾವಧಿ ವಿಸ್ತರಣೆ

**ನಿರ್ಣಯ:** ವಿಶ್ವವಿದ್ಯಾನಿಲಯಕ್ಕೆ ಯಾವುದೇ ಆರ್ಥಿಕ ನಷ್ಟ ಉಂಟಾಗದ ಷರತ್ತಿನ ಮೇರೆಗೆ ದಿನಾಂಕ 10.02.2022 ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ವಿಸ.1:12(2022)

**ವಿಷಯ:** Construction of Class Room (including technologically enabled class rooms) for University College, Mangalore under component 9 of RUSA

2.0 – ಕಾಲಾವಧಿ ವಿಸ್ತರಣೆ

**ನಿರ್ಣಯ:** ವಿಶ್ವವಿದ್ಯಾನಿಲಯಕ್ಕೆ ಯಾವುದೇ ಆರ್ಥಿಕ ನಷ್ಟ ಉಂಟಾಗದ ಷರತ್ತಿನ ಮೇರೆಗೆ ದಿನಾಂಕ 10.02.2022 ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ವಿಸ.1:13(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಕಟ್ಟಡ ನಿರ್ಮಾಣ ಕಾಮಗಾರಿಗಳಿಗೆ ನೇಮಿಸಿರುವ ವಾಸ್ತುಶಿಲ್ಪಿಗಳ ಐದು ವರ್ಷದ ಸೇವಾ ಅವಧಿಯನ್ನು ವಿಸ್ತರಿಸುವ ಕುರಿತು.

**ನಿರ್ಣಯ:** ದಿನಾಂಕ 10.02.2022 ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ವಿಸ.1:14(2022)

**ವಿಷಯ:** Construction of International Hostel, Class room complex and Auditorium Interior works for Mangalore University, Mangalagangothri – ವಾಸ್ತು ಶಿಲ್ಪಿ ಶುಲ್ಕದ ಪಾವತಿಯ ಬಗ್ಗೆ.

**ನಿರ್ಣಯ:** ದಿನಾಂಕ 10.02.2022 ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ವಿಸ.1:15(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಿಂದ ನಿರ್ವಹಿಸಲ್ಪಡುವ ರೂ.5.00 ಲಕ್ಷ ಮೀರದಂತಹ ಕಾಮಗಾರಿಗಳಿಗೆ ಇ–ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರು ಕರೆಯುವ ಬಗ್ಗೆ ವಿನಾಯಿತಿ ನೀಡುವ ಕುರಿತು.

**ನಿರ್ಣಯ:** ಪ್ರಸ್ತಾವನೆಯನ್ನು ಕೂಲಂಕಷವಾಗಿ ಚರ್ಚಿಸಲಾಯಿತು. ವಿಶ್ವವಿದ್ಯಾನಿಲಯದಲ್ಲಿ ತುರ್ತು ಮತ್ತು ವಿಶೇಷ ಸಂದರ್ಭಗಳಲ್ಲಿ ಮಾತ್ರ ಅನ್ವಯವಾಗುವಂತೆ ಕ್ರಮಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಿ ದಿನಾಂಕ 10.02.2022 ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ವಿಸ.1:16(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿ ಶ್ರೀ ನಾರಾಯಣ ಗುರು ಅಧ್ಯಯನ ಪೀಠ ಕಟ್ಟಡದ ನಿರ್ಮಾಣ ಕಾಮಗಾರಿ – ಮಾನ್ಯ ಸಂಸದರಾದ ಶ್ರೀ ನಳಿನ್ ಕುಮಾರ್ ಕಟೀಲ್ ದಕ್ಷಿಣ ಕನ್ನಡ ಜಿಲ್ಲೆ ಇವರ ಅನುದಾನ

ಅಂದಾಜು ಮೊತ್ತ ರೂ.10.00 ಲಕ್ಷಗಳು

**ನಿರ್ಣಯ:** ದಿನಾಂಕ 10.02.2022 ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ವಿಸ.1:17(2022)

**ವಿಷಯ:** Construction of Ladies Hostel for SC/ST Students under AICTE – CAFES Scheme at Mangalore University Campus, Mangalagangothri – ಟೆಂಡರು

ಅಂಗೀಕರಿಸುವ ಬಗ್ಗೆ.

**ನಿರ್ಣಯ:** ದಿನಾಂಕ 10.02.2022 ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ವಿಸ.1:18(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ವತಿಯಿಂದ ಕೊಣಾಜೆ ಪೊಲೀಸ್ ಠಾಣೆಗೆ ಕುಡಿಯುವ ನೀರು ಸರಬರಾಜು ಮಾಡುವ ಬಗ್ಗೆ.

**ನಿರ್ಣಯ:** ಕಾರ್ಯಸೂಚಿಯಲ್ಲಿ ನಮೂದಿಸಲಾದ ಷರತ್ತಿನ **ಕ್ರಮ ಸಂಖ್ಯೆ 4ನ್ನು** ಹೊರತುಪಡಿಸಿ ನೀರು ಪೂರೈಕೆಗೆ ಸಂಬಂಧಿಸಿ ಮಾಪಕ ಮತ್ತು ನಿಯಂತ್ರಣವನ್ನು ಅಳವಡಿಸಿಕೊಳ್ಳಲು ಸಂಬಂಧಪಟ್ಟವರಿಗೆ ಸೂಚಿಸಿ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ವಿಸ.1:19(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ನಡೆಸಲಾಗುವ Post Doctoral ಕಾರ್ಯಕ್ರಮಕ್ಕೆ ಸಂಬಂಧಿಸಿ ತಯಾರಿಸಲಾಗಿರುವ ಮಾರ್ಗಸೂಚಿಯ ಅನುಮೋದನೆ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ವಿಸ.1:20(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳಲ್ಲಿ ನಡೆಸಲಾಗುವ ಸ್ನಾತಕೋತ್ತರ ಕಾರ್ಯಕ್ರಮಗಳನ್ನು ನಿಯಂತ್ರಿಸುವ ತಿದ್ದುಪಡಿ ವಿನಿಯಮದ ಅನುಮೋದನೆ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಕಾನೂನು ಘಟಕ:ವಿಸ.1:21(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ನ್ಯಾಯವಾದಿಗಳ ಯಾದಿಗೆ ವಿ. ತಿಪ್ಪೇಸ್ವಾಮಿ. ನ್ಯಾಯವಾದಿ ಬೆಂಗಳೂರು ಇವರನ್ನು ಸೇರಿಸುವ ಬಗ್ಗೆ.

**ನಿರ್ಣಯ:** ಕಾರ್ಯಸೂಚಿಯನ್ನು ಕೈಬಿಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ:ವಿಸ.1:22(2022)

**ವಿಷಯ:** ಡಾ. ಉಮೇಶ್ ನಾಯ್ಕ್, ಸಹಾಯಕ ಪ್ರಾಧ್ಯಾಪಕರು, ಗ್ರಂಥಾಲಯ ಹಾಗೂ ಮಾಹಿತಿ ವಿಜ್ಞಾನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರ ವಿರುದ್ಧ ವಿಭಾಗದ ವಿದ್ಯಾರ್ಥಿನಿಯರು ನೀಡಿರುವ ದೂರಿನ ಬಗ್ಗೆ.

**ನಿರ್ಣಯ:** ಪ್ರಕರಣದ ಸಮಗ್ರ ಮಾಹಿತಿಗಳೊಂದಿಗೆ ಮುಂದಿನ ಸಿಂಡಿಕೇಟು ಸಭೆಗೆ ಕಾರ್ಯಸೂಚಿ ಮಂಡಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ:ವಿಸ.1:23(2022)
**ವಿಷಯ:** 2020–21ನೇ ಸಾಲಿಗೆ ಮಂಗಳೂರು ವಿಶ್ವವಿದ್ಯಾನಿಲಯದ ಅಂತರ್ ಕಾಲೇಜು ಕ್ರೀಡಾ ಚಟುವಟಿಕೆಗಳಿಗೆ ಪದಕ ಖರೀದಿಸುವ ಕುರಿತು.
**ನಿರ್ಣಯ:** ಪ್ರಸ್ತಾವನೆಯನ್ನು ನಿಯಮಾನುಸಾರ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ:ವಿಸ.1:24(2022)
**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಮಂಗಳ ಯೋಜನೆಯಡಿ ಹೆಚ್ಚುವರಿಯಾಗಿ ಎರಡು ಗ್ರಾಮಗಳನ್ನು ದತ್ತು ತೆಗೆದುಕೊಳ್ಳುವ ಬಗ್ಗೆ.
**ನಿರ್ಣಯ:** ಪ್ರಸ್ತಾವನೆಯನ್ನು ನಿಯಮಾನುಸಾರ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ವಿಸ.1:25(2022)
**ವಿಷಯ:** ಶ್ರೀ ವೈ. ರವಿಕಾಂತ್ ಭಟ್, ಇವರು ಕೆ.ಸಿ.ಎಸ್.ಆರ್. ನಿಯಮ 285 (2) ರಂತೆ ನಿವೃತ್ತಿ ಪಿಂಚಣಿಯನ್ನು ಮಂಜೂರು ಮಾಡಲು ಸಲ್ಲಿಸಿರುವ ಮನವಿ ಕುರಿತು.
**ನಿರ್ಣಯ:** ಸದರಿಯವರ ಮನವಿಯನ್ನು ಪರಿಗಣಿಸಿಕೊಂಡು ನಿಯಮಾನುಸಾರ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ವಿಸ.1:26(2022)
**ವಿಷಯ:** ಡಾ. ಐರಾಣಿ ಮೊಹಮ್ಮದ್ ಖಾನ್, ಹಿಂದಿನ ಕುಲಸಚಿವರು ಹಾಗೂ ಪ್ರಾಧ್ಯಾಪಕರು, ಇಲೆಕ್ಟ್ರಾನಿಕ್ಸ್ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರ ಮೇಲಿನ ಕರ್ತವ್ಯ ಲೋಪದ ಆರೋಪದ ಬಗೆಗಿನ ಇಲಾಖಾ ವಿಚಾರಣೆಯ ವರದಿ ಕುರಿತು.
**ನಿರ್ಣಯ:** ಸಮಗ್ರ ಮಾಹಿತಿಗಳೊಂದಿಗೆ ಮುಂದಿನ ಸಿಂಡಿಕೇಟು ಸಭೆಗೆ ಕಾರ್ಯಸೂಚಿ ಮಂಡಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ವಿಸ.1:27(2022)
**ವಿಷಯ:** ಡಾ. ಅಣ್ಣಯ್ಯ ರಮೇಶ್, ಸಹಾಯಕ ಪ್ರಾಧ್ಯಾಪಕರು, ಅನ್ವಯಿಕ ಸಸ್ಯಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರ ಮೇಲಿನ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ಕುರಿತು.
**ನಿರ್ಣಯ:** ಸಮಗ್ರ ಮಾಹಿತಿಗಳೊಂದಿಗೆ ಮುಂದಿನ ಸಿಂಡಿಕೇಟು ಸಭೆಗೆ ಕಾರ್ಯಸೂಚಿ ಮಂಡಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ವಿಸ.1:28(2022)
**ವಿಷಯ:** ಡಾ. ಅರಬಿ ಯು., ಪ್ರಾಧ್ಯಾಪಕರು, ಅರ್ಥಶಾಸ್ತ್ರ ವಿಭಾಗ, ಇವರಿಗೆ ಸೇವಾ ಸವಲತ್ತುಗಳನ್ನು ವಿಸ್ತರಿಸಿರುವ ಹಾಗೂ ಇಲಾಖಾ ವಿಚಾರಣೆ ನಡೆಸಲು ಕ್ರಮ ಕೈಗೊಂಡ ಬಗ್ಗೆ – ಘಟನೋತ್ತರ ಅನುಮೋದನೆ ಕುರಿತು.
**ನಿರ್ಣಯ:** ಡಾ. ಅರಬಿ ಯು., ಪ್ರಾಧ್ಯಾಪಕರು, ಅರ್ಥಶಾಸ್ತ್ರ ವಿಭಾಗ ಇವರ ಬಗ್ಗೆ ನ್ಯಾಯಾಲಯದಲ್ಲಿ ವಿಚಾರಣೆಗೆ ಬಾಕಿಯಿರುವ ತೀರ್ಪನ್ನು ಪರಿಗಣಿಸಿಕೊಂಡು, ಸದರಿಯವರಿಗೆ ವಿಸ್ತರಿಸಲಾಗಿರುವ ಸೇವಾ ಸವಲತ್ತು ಮತ್ತು ಇಲಾಖಾ ವಿಚಾರಣೆ ನಡೆಸಲು ಕ್ರಮ ಕೈಗೊಂಡ ಬಗ್ಗೆ ಪ್ರತ್ಯೇಕ ಪ್ರತ್ಯೇಕವಾದ ಕಾರ್ಯಸೂಚಿಗಳನ್ನು

ಸಮಗ್ರ ಮಾಹಿತಿಯೊಂದಿಗೆ ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ವಿಸ.1:29(2022)
**ವಿಷಯ:** ಶ್ರೀ ಗೋವಿಂದ ಮಟ್ಟಿ, ಹಿರಿಯ ಸಹಾಯಕರು (ನಿವೃತ್ತ), ಮಂಗಳೂರು ವಿಶ್ವವಿದ್ಯಾನಿಲಯ ಇವರ ಸೇವಾ ಅವಧಿಯ ಗಳಿಕೆ ರಜೆಯನ್ನು ನಗದೀಕರಿಸಲು ಸಲ್ಲಿಸಿದ ಮನವಿ ಬಗ್ಗೆ.
**ನಿರ್ಣಯ:** ಪ್ರಸ್ತಾವನೆಯನ್ನು ಸದರಿಯವರ ಮನವಿಯನ್ನು ಪರಿಗಣಿಸಿಕೊಂಡು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ವಿಸ.1:30(2022)
**ವಿಷಯ:** ಡಾ. ಶಾಮಸುಂದರ್ ಜೆ., ಸಹಾಯಕ ಪ್ರಾಧ್ಯಾಪಕರು, ಇವರ ಮೇಲಿನ ಇಲಾಖಾ ವಿಚಾರಣೆ – ದಂಡನೆ ಆದೇಶವನ್ನು ಪುನರ್ ಪರಿಶೀಲಿಸಿ ದೋಷಮುಕ್ತಗೊಳಿಸುವಂತೆ ಹಾಗೂ ತಡೆಹಿಡಿಯಲಾದ ವೇತನ ಬಡ್ತಿ ಹಾಗೂ ವೇತನ ಬಾಕಿ ಮೊತ್ತವನ್ನು ನೀಡುವಂತೆ ಸಲ್ಲಿಸಿರುವ ಮನವಿ ಬಗ್ಗೆ.
**ನಿರ್ಣಯ:** ಸಮಗ್ರ ದಾಖಲೆಗಳೊಂದಿಗೆ ಮುಂದಿನ ಸಿಂಡಿಕೇಟು ಸಭೆಗೆ ಕಾರ್ಯಸೂಚಿ ಮಂಡಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ವಿಸ.1:31(2022)
**ವಿಷಯ:** 2019–20 ನೇ ಸಾಲಿನ ಪಂಚಾಯತ್ ತೆರಿಗೆಯಲ್ಲಿ ಬಾಕಿಯಿರುವ ತೆರಿಗೆ ಪಾವತಿಸುವ ಕುರಿತು.
**ನಿರ್ಣಯ:** ಪ್ರಸ್ತಾವನೆಯನ್ನು ನಿಯಮಾನುಸಾರ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ವಿಸ.1:32(2022)
**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯಲದಲ್ಲಿ Skill Development ಯೋಜನೆಯನ್ನು ಕಾರ್ಯಗತಗೊಳಿಸಲು M/s. Cadmaxx Solutions Private Ltd., Bangalore ಇವರ ಸೇವೆಯನ್ನು ಬಳಸಿಕೊಳ್ಳುವ ಬಗ್ಗೆ.
**ನಿರ್ಣಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಮಾಡಿಕೊಳ್ಳಲಾಗುವ ಒಡಂಬಡಿಕೆಗಳನ್ನು ವಿಶ್ವವಿದ್ಯಾನಿಲಯದ ನ್ಯಾಯವಾದಿಗಳ ಯಾದಿಯಲ್ಲಿರುವ ನ್ಯಾಯವಾದಿಗಳಿಂದ ತಯಾರಿಸಿ/ಪರಿಶೀಲಿಸಿಕೊಂಡು ಮುಂದಿನ ಸೂಕ್ತ ಕ್ರಮಕೈಗೊಳ್ಳಲು ಮಾನ್ಯ ಕುಲಪತಿಯವರಿಗೆ ಅಧಿಕಾರ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ವಿಸ.1:33(2022)
**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿ ಅಳವಡಿಸಲಾಗಿರುವ ಸಿ.ಸಿ.ಟಿ.ವಿ. ಬಯೋಮೆಟ್ರಿಕ್ಸ್ ಹಾಗೂ ಸೋಲಾರ್ ಉಪಕರಣಗಳ ಪ್ರಕ್ರಿಯೆ ಮತ್ತು ಕಾರ್ಯಕ್ಷಮತೆಯ ವೈಫಲ್ಯತೆ ಬಗ್ಗೆ ಶಿಸ್ತು ಕ್ರಮ ಕೈಗೊಳ್ಳುವ ಕುರಿತು.
**ನಿರ್ಣಯ:** ಪ್ರಸ್ತಾವಿತ ವಿಷಯಕ್ಕೆ ಸಂಬಂಧಿಸಿ ಆಂತರಿಕ ಪರಿಶೀಲನಾ ಸಮಿತಿಯು ದಿನಾಂಕ 27.07.2020 ನೀಡಿರುವ ವರದಿಯನ್ನು ಪರಿಗಣಿಸಿಕೊಂಡು ಉಚ್ಛನ್ಯಾಯಾಲಯದ ನಿವೃತ್ತ ನ್ಯಾಯಾದೀಶರಿಂದ ಪ್ರಕರಣದಲ್ಲಿ ಭಾಗಿಯಾಗಿರುವ ತನಕ ವಿವರಗಳನ್ನು

ಪಡೆದು ಸರಕಾರಕ್ಕೆ ಸಲ್ಲಿಸಲು ತೀರ್ಮಾನಿಸಲಾಯಿತು. ವರದಿಯನ್ನು ಪರಿಗಣಿಸಿಕೊಂಡು ಉಚ್ಚ ನ್ಯಾಯಾಲಯದ ನಿವೃತ್ತ ನಾಯಾಧೀಶರಿಂದ ಪ್ರಕರಣದ ಸಮಗ್ರ ತನಿಖೆಯನ್ನು ನಡೆಸಲು ತೀರ್ಮಾನಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಹಣಕಾಸು:ವಿಸ.1:34(2022)
**ವಿಷಯ:** 2020–21ನೇ ಸಾಲಿನ ವಾರ್ಷಿಕ ಲೆಕ್ಕ ಪತ್ರಗಳ ಅನುಮೋದನೆ ಬಗ್ಗೆ.
**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಕಾನೂನು ಘಟಕ:ವಿಸ.1:35(2022)
**ವಿಷಯ:** ಕರ್ನಾಟಕ ರಾಜ್ಯ ಉಚ್ಛ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ 15070/2020 (ಎಸ್) ಸಂಬಂಧಿಸಿದಂತೆ ಹೊರಡಿಸಿರುವ ತೀರ್ಪು ದಿನಾಂಕ 20.07.2021ವನ್ನು ಅನುಷ್ಠಾನಗೊಳಿಸಿ ತತ್ಪರಿಣಾಮವಾಗಿ ಸೇವಾ ಸವಲತ್ತುಗಳನ್ನು ಡಾ. ಅರಬಿ ಯು., ಪ್ರಾಧ್ಯಾಪಕರು, ಅರ್ಥಶಾಸ್ತ್ರ ವಿಭಾಗ ಇವರಿಗೆ ವಿಸ್ತರಿಸದೇ ಇರುವ ಬಗ್ಗೆ ಹಾಗೂ ಅವರು ಸಲ್ಲಿಸಿರುವ ಮನವಿ ದಿನಾಂಕ 30.07.2021ವನ್ನು ಪರಿಗಣಿಸದೇ ಇರುವ ಬಗ್ಗೆ ಡಾ. ಅರಬಿ ಯು., ಇವರು ಕರ್ನಾಟಕ ರಾಜ್ಯ ಉಚ್ಛ ನ್ಯಾಯಾಲಯದಲ್ಲಿ ಹೂಡಿರುವ ನ್ಯಾಯಾಂಗ ನಿಂದನಾ ಅರ್ಜಿ ಸಂಖ್ಯೆ: 1038/2021 ಗೆ ಸಂಬಂಧಿಸಿದಂತೆ ಪ್ರತಿವಾದಿಗಳ ಪರವಾಗಿ ಲಿಖಿತ ಹೇಳಿಕೆಗಳನ್ನು ಸಲ್ಲಿಸುವ ಬಗ್ಗೆ.
**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ:ವಿಸ.1:36(2022)
**ವಿಷಯ:** ಮಿಸ್. ಸುಂದರಿ ಬೆಲ್ಚಡ್ತಿ ಇವರಿಗೆ ಬಿ.ಎಡ್. ಪದವಿ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡುವ ಬಗ್ಗೆ.
**ನಿರ್ಣಯ:** ಸದರಿ ವಿಷಯವನ್ನು ವಿಶೇಷ ಪ್ರಕರಣವೆಂಬುದಾಗಿ ಪರಿಗಣಿಸಿ ಈ ಒಂದು ಬಾರಿಗೆ ಮಾತ್ರ ಅನ್ವಯವಾಗುವಂತೆ ನಿಯಮಾನುಸಾರ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಯಿತು. ಇದನ್ನು ಪೂರ್ವೋಧಾರಣೆಯೆಂದು ಪರಿಗಣಿಸತಕ್ಕದ್ದಲ್ಲ ಎಂಬುದಾಗಿಯೂ ಸಭೆಯು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ವಿಸ.1:37(2022)
**ವಿಷಯ:** Ms. Farzana Mohammadi ವಿದೇಶಿ ವಿದ್ಯಾರ್ಥಿ ಇವರಿಗೆ ಪಿ.ಹೆಚ್‌ಡಿ. ಕಾರ್ಯಕ್ರಮದ ಶುಲ್ಕದಲ್ಲಿ ವಿನಾಯಿತಿ ನೀಡುವ ಬಗ್ಗೆ ಸಲ್ಲಿಸಿರುವ ಮನವಿ ಕುರಿತು.
**ನಿರ್ಣಯ:** ಸದರಿ ವಿದ್ಯಾರ್ಥಿಯ ಮನವಿಯವನ್ನು ಪರಿಗಣಿಸಿಕೊಂಡು ಭಾರತದ ವಿದ್ಯಾರ್ಥಿಗಳಿಗೆ ನಿಗದಿಪಡಿಸಿರುವ ಶುಲ್ಕವನ್ನು ನಿಗದಿಪಡಿಸುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಇತರ ವಿಷಯಗಳು:**

1. ಮಂಗಳ ಯೋಜನೆಯಡಿ ಶಾಲೆಗಳನ್ನು ದತ್ತು ತೆಗೆದುಕೊಳ್ಳುವಲ್ಲಿ ಆ ಶಾಲಾ ಶಿಕ್ಷಕರ ವಿಶೇಷ ನೈಪುಣ್ಯತೆ, ವಿದ್ಯಾರ್ಥಿಗಳ ಸಾಮಾಜಿಕ ಆರ್ಥಿಕ ಹಿನ್ನೆಲೆಗಳು, ಶಾಲಾ ವಿದ್ಯಾರ್ಥಿಗಳ ಫಲಿತಾಂಶಗಳು ಇವೆಲ್ಲಾ ಮಾನದಂಡಗಳನ್ನಿಟ್ಟುಕೊಂಡು ಪರಿಗಣಿಸಬಹುದೆಂಬುದಾಗಿ ಸಭೆಯಲ್ಲಿ ನಿರ್ಣಯಿಸಲಾಯಿತು.
   ಗ್ರಾಮ ದತ್ತು ತೆಗೆದುಕೊಳ್ಳುವ ಮೊದಲು ಮತ್ತು ದತ್ತು ತೆಗೆದುಕೊಂಡ ನಂತರದ ಬದಲಾವಣೆಗಳನ್ನು ಸಿಂಡಿಕೇಟು ಸಭೆಗೆ ವರದಿ ಸಲ್ಲಿಸಲು ತಿಳಿಸಲಾಯಿತು.

2. ಮಂಗಳೂರು ವಿಶ್ವವಿದ್ಯಾನಿಲಯದ ಮಂಗಳಗಂಗೋತ್ರಿ ಆವರಣಲ್ಲಿ ಹೊಸದಾಗಿ ಪ್ರಾರಂಭಿಸಲಾದ ಫುಡ್ ಕೋರ್ಟಿನ ಆಹಾರದ ಗುಣಮಟ್ಟ, ಪರಿಮಾಣ ಮತ್ತು ತಿಂಡಿ ತಿನಸುಗಳ ಆರೋಗ್ಯಕರ ನೈರ್ಮಲ್ಯತೆಗಳ ಬಗ್ಗೆ ಪರಿಶೀಲಿಸಿ ಕ್ರಮಕೈಗೊಳ್ಳಲು ಹಾಗೂ ಶಿಕ್ಷಕರುಗಳಿಂದಲೂ ಈ ಬಗ್ಗೆ ಪ್ರತಿಕ್ರಿಯೆ ಪಡೆದುಕೊಳ್ಳಲು ಸಭೆಯಲ್ಲಿ ನಿರ್ಣಯಿಸಲಾಯಿತು.
3. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ನಿರ್ಮಿಸಲಾಗುವ ಕಟ್ಟಡಗಳಿಗೆ ಸಂಬಂಧಿಸಿ ವಾಸ್ತು ಶಿಲ್ಪಿಗಳ ಯಾದಿಯನ್ನು ಅತೀ ಶೀಘ್ರವಾಗಿ ತಯಾರಿಸಲು ಕ್ರಮಕೈಗೊಳ್ಳಬೇಕಾಗಿ ಸಭೆಯಲ್ಲಿ ಸೂಚಿಸಲಾಯಿತು.
4. ಮಂಗಳೂರು ವಿಶ್ವವಿದ್ಯಾನಿಲಯದ ಸ್ಥಿರಾಸ್ತಿಯ ಅತಿಕ್ರಮಣದ ಬಗ್ಗೆ ದೂರು ಸ್ವೀಕೃತವಾದ ಹಿನ್ನೆಲೆಯಲ್ಲಿ ಕುಲಸಚಿವರು ವಸ್ತು ಸ್ಥಿತಿಯ ಸಮಗ್ರ ವರದಿಯನ್ನು ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ತಿಳಿಸಲಾಯಿತು.
5. IBM Incubation Centre ನ ಉಪಕರಣದ ಖರೀದಿ ಪಾವತಿಗೆ ಸಂಬಂಧಿಸಿ ದಿನಾಂಕ 28.02.2022ರಂದು ನಡೆದ ಸಿಂಡಿಕೇಟು ಸಭೆಯ ಕಾರ್ಯಸೂಚಿ ಸಂಖ್ಯೆ ಡಿಇವಿ:ಸಾ.ಸ.2:49(2022) ರ ನಿರ್ಣಯದಲ್ಲಿ ಉಪಕರಣ ಕಾರ್ಯಕ್ಷಮತೆಯ ಬಗ್ಗೆ ಪ್ರೊ.ಶಶಿರೇಖಾ, ಪ್ರಾಧ್ಯಾಪಕರು, ಗಣಕ ವಿಜ್ಞಾನ ವಿಭಾಗ ಮತ್ತು ನಿರ್ದೇಶಕರು, ಗಣಕಯಂತ್ರ ಕೇಂದ್ರ ಇವರಿಂದ ತಾಂತ್ರಿಕ ವರದಿಯನ್ನು ಪಡೆದುಕೊಂಡು ಎಂಬುದಾಗಿ ಉಲ್ಲೇಖವಾದ ಹಿನ್ನೆಲೆಯಲ್ಲಿ ಅದನ್ನು ಈ ರೀತಿಯಾಗಿ ಸರಿಪಡಿಸಲು ಸಭೆಯು ನಿರ್ಣಯಿಸಿತು;

   *"ಉಪಕರಣದ ಕಾರ್ಯಕ್ಷಮತೆಯ ವರದಿಯನ್ನು ತಜ್ಞರುಗಳಿಂದ ಪಡೆದುಕೊಂಡು ಖರೀದಿ ಒಪ್ಪಂದದಲ್ಲಿ ವಿಧಿಸಿರುವ ಷರತ್ತುಗಳನ್ನು ಪೂರೈಸುವ ಮೇರೆಗೆ ಮೊತ್ತವನ್ನು ಹಂತ ಹಂತವಾಗಿ ಸಂಬಂಧಪಟ್ಟ ಸಂಸ್ಥೆಯವರಿಗೆ ನಿಯಮಾನುಸಾರ ಬಿಡುಗಡೆ ಮಾಡಲು ಸೂಕ್ತ ಕ್ರಮಕೈಗೊಳ್ಳಲು ನಿರ್ಣಯಿಸಲಾಯಿತು ಹಾಗೂ ಈ ಎಲ್ಲಾ ಪ್ರಕ್ರಿಯೆಯ ಪೂರ್ಣ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು."*

6. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಕಾಗದದ ಮಿತ ಬಳಕೆಯನ್ನು ಉತ್ತೇಜಿಸುವ ಸಲುವಾಗಿ ಸಿಂಡಿಕೇಟ್ ಸಭೆ ಹಾಗೂ ಇತರ ಸಭೆಗಳಿಗೆ ಅನ್ವಯವಾಗುವಂತೆ ಸಿಂಡಿಕೇಟ್ ಹಾಲ್‌ಗೆ ಲ್ಯಾಪ್‌ಟ್ಯಾಪ್ ಅಳವಡಿಸಲು ತೀರ್ಮಾನಿಸಲಾಯಿತು.

ಮಾನ್ಯ ಕುಲಸಚಿವರು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ಸಹಿ/– | ಸಹಿ/– |
| ಕುಲಸಚಿವರು | ಕುಲಪತಿಗಳು. |